# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಬೆಂಗಳೂರಿನಲ್ಲಿ ಸಮುದಾಯ ಭವನ ನಿರ್ಮಿಸಲು ಬಿ.ಡಿ.ಎ ವ್ಯಾಪ್ತಿಯಲ್ಲಿ ಬರುವ ನಾಗರೀಕ ಸೌಲಭ್ಯ ನಿವೇಶನವನ್ನು ನೀಡಲು ಹಾಗೂ ಸಮುದಾಯದ ಅಭಿವೃದ್ಧಿಗೆ 2.00 ಕೋಟಿ ರೂ.ಗಳ ಅನುದಾನ ಬಿಡುಗಡೆ ಮಾಡಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:**1 2016-17ನೇ ಸಾಲಿನ ಆಯವ್ಯಯ ಭಾಷಣ.

2 ಆರ್ಥಿಕ ಇಲಾಖೆಯ U.O Note No: FD 255 Exp-3/2016 dated: 01.04.2016.

3 ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ಆ.ಇಂಸ.ಭ/ಸಿಆರ್-87/2016-17 ದಿ: 04.08.2016.

>>>()<<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ (1)ರಲ್ಲಿ 2016-17ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣ ಕಂಡಿಕೆ-217ರಲ್ಲಿ 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಬೆಂಗಳೂರಿನಲ್ಲಿ ಸಮುದಾಯಭವನ ನಿರ್ಮಿಸಲು ಬಿ.ಡಿ.ಎ ವ್ಯಾಪ್ತಿಯಲ್ಲಿ ಬರುವ ನಾಗರೀಕ ಸೌಲಭ್ಯ ನಿವೇಶನವನ್ನು ನೀಡಲಾಗುವುದು ಹಾಗೂ ಸಮುದಾಯದ ಅಭಿವೃದ್ಧಿಗೆ 2 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದೆಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರಲ್ಲಿ ಲೆಕ್ಕಶೀರ್ಷಿಕೆ 2225-03-102-0-14 ಕ್ರೈಸ್ತ ಅಭಿವೃದ್ಧಿ ಯೋಜನೆಯಡಿ ಒದಗಿಸಲಾದ ಅನುದಾನ (ನಿರ್ದೇಶನಾಲಯಕ್ಕೆ) ರೂ. 7500 ಲಕ್ಷಗಳಲ್ಲಿ ರೂ. 2.00 ಕೋಟಿಗಳನ್ನು ಒದಗಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ (3)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ Governing Member-Karnataka & Goa, The all india Anglo-Indian Association and Karnataka Legislative Assembly Member Smt Vinisha Nero ರವರು 2016-17ನೇ ಸಾಲಿನಲ್ಲಿ ಪ್ಯಾರ ಸಂಖ್ಯೆ 217 ರಲ್ಲಿ ಘೋಷಿಸಿರುವಂತೆ ರೂ. 2.00 ಕೋಟಿಗಳನ್ನು ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವಂತೆ ಹಾಗೂ ಆಂಗ್ಲೋ ಇಂಡಿಯನ್ ಸಮುದಾಯ ಭವನವನ್ನು ಬೆಂಗಳೂರಿನಲ್ಲಿ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಿ.ಎ ನಿವೇಶನವನ್ನು ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿ ಮಂಜೂರು ಮಾಡಲು ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

....2

ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಆಂಗ್ಲೋ ಇಂಡಿಯನ್ ಸಂಸ್ಥೆಗೆ ಸಿ.ಎ ನಿವೇಶನ ಪಡೆಯಲು ಹಾಗೂ ಸಮುದಾಯ ಅಭಿವೃದ್ಧಿಗೆ ರೂ.2.00 ಕೋಟಿ ಅನುದಾನ ಮಂಜೂರು ಮಾಡಿ ಆದೇಶ ಹೊರಡಿಸಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಏಕಕಡತ ಪದ್ಧತಿಯಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 333 ಎಂಡಿಎಸ್ 2016, ದಿನಾಂಕ:22-11-2016.**

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2016-17ನೇ ಸಾಲಿನಲ್ಲಿ ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ನಾಗರೀಕ ಸೌಲಭ್ಯ ನಿವೇಶನವನ್ನು ಪಡೆದು ಬೆಂಗಳೂರಿನಲ್ಲಿ ಸಮುದಾಯಭವನ ನಿರ್ಮಿಸಲು ಹಾಗೂ ಸಮುದಾಯದ ಅಭಿವೃದ್ಧಿಗಾಗಿ **2.00 ಕೋಟಿ ರೂ.ಗಳ** ಸಹಾಯಧನವನ್ನು ಮಂಜೂರು ಮಾಡಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಹಾಯಧನವನ್ನು ಸಂಬಂಧಪಟ್ಟ ಸಂಸ್ಥೆಗೆ ಬಿಡುಗಡೆ ಮಾಡಲು ನಿಯಮಾನುಸಾರ ಕ್ರಮವಹಿಸತಕ್ಕದ್ದು.
2. ಹಾಗೂ ಈ ಸಹಾಯಧನ ಸದ್ಬಳಕೆ ಆಗಿರುವ ಕುರಿತಂತೆ ನಿಯಮಾನುಸಾರ ಪರಿಶೀಲಿಸಿ, ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಅನುದಾನ ಬಳಕೆ ಮಾಡಿದ ಬಗ್ಗೆ ಹಣ ಉಪಯುಕ್ತತೆ ಪ್ರಮಾಣ ಪತ್ರವನ್ನು ದಾಖಲೆಗಳೊಂದಿಗೆ ನೀಡುವುದು.
3. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳುವುದು ಹಾಗೂ ಇದೇ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗಿದೆ ಎಂಬ ಬಗ್ಗೆ ಪರಿಶೀಲಿಸಿ ಸರ್ಕಾರಕ್ಕೆ ವರದಿ ನೀಡುವುದು.
4. ಖಾಸಗಿ ಸಂಸ್ಥೆಯು ಅನುದಾನವನ್ನು ಸದುಪಯೋಗ ಮಾಡದೇ ಇದ್ದಲ್ಲಿ, ಅಂತಹ ಸಂಸ್ಥೆಗಳಿಂದ ಅನುದಾನವನ್ನು ಪೂರ್ಣವಾಗಿ ಸರ್ಕಾರಕ್ಕೆ ಹಿಂದಿರುಗಿಸಲು ನಿಬಂಧನೆ ಹಾಕಿ, ಮುಚ್ಚಳಿಕೆ ಪತ್ರ ಪಡೆದು ಅನುದಾನ ನೀಡತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2016-17ನೇ ಸಾಲಿನ ಲೆಕ್ಕಶೀರ್ಷಿಕೆ:- 2225-03-102-0-14 ಕ್ರೈಸ್ತ ಅಭಿವೃದ್ಧಿ ಯೋಜನೆ ರಾಜ್ಯವಲಯ ಯೋಜನೆಯಡಿ ಒದಗಿಸಲಾದ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

...3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 549 ವೆಚ್ಚ-3/2016 ದಿನಾಂಕ:30-08-2016 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 102 ಐಎಂಎಂ 2016 ದಿ:26-08-2016ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**( ಅಕ್ರಂಭಾಷಾ )**
**ಸರ್ಕಾರದ ಆಧೀನ ಕಾರ್ಯದರ್ಶಿ,**
**ಅಲ್ಪಸಂಖ್ಯಾತರ ಕಲ್ಯಾಣ, ಹಜ್**
**ಮತ್ತು ವಕ್ಫ್ ಇಲಾಖೆ**
22/11

ಗೆ,

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. 20ನೇ ಮಹಡಿ, ವಿ.ವಿ. ಗೋಪುರ, ಬೆಂಗಳೂರು.
6. ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
8. ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
9. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
10. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ.
12. ಹೆಚ್ಚುವರಿ ಪ್ರತಿಗಳು.